# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 781(989) |
| ಸದಸ್ಯರ ಹೆಸರು | : | ಶ್ರೀ ಕಿಶೋರ್ ಕುಮಾರ್ ಪುತ್ತೂರು(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 14.03.2025 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ) | ಗ್ರಾಮ ಪಂಚಾಯತ್ ಸದಸ್ಯರಿಗೆ, ಅಧ್ಯಕ್ಷರಿಗೆ ಮತ್ತು ಉಪಾಧ್ಯಕ್ಷರಿಗೆ ಪ್ರಸ್ತುತ ನೀಡಲಾಗುತ್ತಿರುವ ಗೌರವಧನವೆಷ್ಟು; ಇವರುಗಳಿಗೆ ಯಾವ ಯಾವ ಭತ್ಯೆಗಳನ್ನು ನೀಡಲಾಗುತ್ತಿದೆ; ಇವರುಗಳಿಗೆ ಗೌರವಧನ ಪರಿಷ್ಕರಣೆ ಯಾವಾಗ ಮಾಡಲಾಗಿರುತ್ತದೆ; | ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.6,000/-ಗಳು, ಉಪಾಧ್ಯಕ್ಷರುಗಳಿಗೆ ರೂ.4,000/-ಗಳು ಮತ್ತು ಸದಸ್ಯರುಗಳಿಗೆ ರೂ.2,000/-ಗಳಂತೆ ಮಾಸಿಕವಾಗಿ ಗೌರವಧನ ನೀಡಲಾಗುತ್ತಿರುತ್ತದೆ.<br><br>ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಪ್ರಯಾಣ ಭತ್ಯೆ, ದಿನ ಭತ್ಯೆ ಹಾಗೂ ಸಭಾ ಭತ್ಯೆ(ಉಪವೇಶನ ಶುಲ್ಕ)ಯನ್ನು ನೀಡಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 126 ಜಿಪಸ 2022, ಬೆಂಗಳೂರು, ದಿನಾಂಕ:18-12-2022ರನ್ವಯ ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವಧನವನ್ನು ಹೆಚ್ಚಿಸಿ ಆದೇಶಿಸಲಾಗಿರುತ್ತದೆ (ಪ್ರತಿ ಲಗತ್ತಿಸಿದೆ). |
| ಆ) | ಗ್ರಾಮ ಪಂಚಾಯತ್ ಸದಸ್ಯರಿಗೆ ಪ್ರಸ್ತುತ ನೀಡುತ್ತಿರುವ ಗೌರವಧನ ಅತ್ಯಂತ ಕಡಿಮೆ ಇದ್ದು, ಇದನ್ನು ಹೆಚ್ಚು ಮಾಡಲು ಸರ್ಕಾರ ಕ್ರಮವಹಿಸುವುದೇ; ವಹಿಸಿದ್ದಲ್ಲಿ ಎಷ್ಟು ಹೆಚ್ಚಳ ಮಾಡಲು ಕ್ರಮವಹಿಸಲಾಗುವುದು; | ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಮಾಸಿಕ ಗೌರವಧನವನ್ನು ಇತ್ತೀಚಿಗೆ ಹೆಚ್ಚಿಸಲಾಗಿರುತ್ತದೆ. ಪ್ರಸ್ತುತ ಮತ್ತೊಮ್ಮೆ ಗೌರವಧನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| ಇ) | ಗ್ರಾಮ ಪಂಚಾಯತ್ ಸದಸ್ಯರ ದೂರವಾಣಿ ಭತ್ಯೆ, ಪ್ರಯಾಣ ಭತ್ಯೆ ಹೆಚ್ಚಳ ಮಾಡಲು ಸರ್ಕಾರ ನಿರ್ಧರಿಸಿದೆಯೇ; ಯಾವ ಕಾಲಮಿತಿಯಲ್ಲಿ ಇವರುಗಳ ವಿವಿಧ ಭತ್ಯೆಗಳನ್ನು ಪರಿಷ್ಕರಿಸಲಾಗುವುದು; | ಪ್ರಸ್ತುತ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಗ್ರಾಮ ಪಂಚಾಯತಿ ವಹಿಸುವ ಕಾರ್ಯಗಳನ್ನು ನಿರ್ವಹಿಸಲು ಪ್ರಯಾಣಿಸಬಹುದಾದ ದೂರಕ್ಕನುಸಾರವಾಗಿ ಗ್ರಾಮ ಪಂಚಾಯತಿಯಿಂದ ಪ್ರಯಾಣ ಭತ್ಯೆ ಪಡೆಯಲು ಅವಕಾಶವಿರುತ್ತದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರಲ್ಲಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ದೂರವಾಣಿ ಭತ್ಯೆ ಸೌಲಭ್ಯಗಳಿಗೆ ಯಾವುದೇ ಅವಕಾಶವನ್ನು ಕಲ್ಪಿಸಿರುವುದಿಲ್ಲ. |

| | | |
|---|---|---|
| ಈ) | ಗ್ರಾಮ ಪಂಚಾಯತ್ ಸದಸ್ಯರಿಗೆ ಜೀವ ವಿಮಾ ಸೌಲಭ್ಯ/ಆರೋಗ್ಯ ವಿಮೆ ಸೌಲಭ್ಯ ನೀಡುವ ಬಗ್ಗೆ ಸರ್ಕಾರದ ನಿಲುವೇನು? | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರಲ್ಲಿ ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳಿಗೆ ಜೀವ ವಿಮೆ ಹಾಗೂ ಆರೋಗ್ಯ ವಿಮೆ ಸೌಲಭ್ಯಗಳಿಗೆ ಯಾವುದೇ ಅವಕಾಶವನ್ನು ಕಲ್ಪಿಸಿರುವುದಿಲ್ಲ. |

**ಸಂಖ್ಯೆ: ಗ್ರಾಅಪಂರಾ 41 ಜಿಪಸ 2025**

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಚುನಾಯಿತ ಪ್ರತಿನಿಧಿಗಳಿಗೆ ಗೌರವಧನವನ್ನು ಹೆಚ್ಚಿಸುವ ಬಗ್ಗೆ.

ಓದಲಾಗಿದೆ:

ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ:03-05-2017.

**ಪ್ರಸ್ತಾವನೆ:**

ಮೇಲೆ ಓದಲಾದ ಆದೇಶದಲ್ಲಿ, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.3000/-, ಉಪಾಧ್ಯಕ್ಷರುಗಳಿಗೆ ರೂ.2000/- ಹಾಗೂ ಸದಸ್ಯರುಗಳಿಗೆ ರೂ.1000/-ಗಳ ಮಾಸಿಕ ಗೌರವಧನವನ್ನು ನಿಗದಿಪಡಿಸಲಾಗಿತ್ತು. ಪ್ರಸ್ತುತ ಗೌರವಧನವನ್ನು ಪರಿಷ್ಕರಿಸಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ರೂ.6,000/-, ಉಪಾಧ್ಯಕ್ಷರುಗಳಿಗೆ ರೂ.4,000/- ಹಾಗೂ ಸದಸ್ಯರುಗಳಿಗೆ ರೂ.2,000/-ಗಳ ಮಾಸಿಕ ಗೌರವಧನವನ್ನು ನಿಗದಿಗೊಳಿಸಲು ತೀರ್ಮಾನಿಸಿದೆ . ಆದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 126 ಜಿಪಸ 2022, ಬೆಂಗಳೂರು ದಿನಾಂಕ:18-12-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತಿಗಳ ಅಧ್ಯಕ್ಷರುಗಳಿಗೆ ಮಾಸಿಕ ರೂ.6,000/-, ಉಪಾಧ್ಯಕ್ಷರುಗಳಿಗೆ ಮಾಸಿಕ ರೂ.4,000/- ಹಾಗೂ ಸದಸ್ಯರುಗಳಿಗೆ ಮಾಸಿಕ ರೂ.2,000/-ಗಳ ಗೌರವಧನವನ್ನುಪರಿಷ್ಕರಿಸಿ ನಿಗದಿಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 909 ವೆಚ್ಚ 06 2022, ದಿನಾಂಕ:18.12.2022 ರನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಎನ್.ಬಾನೊಳ್ಳಿ)
ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು,
3. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.

4. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
5. ಆಯುಕ್ತರು, ಕರ್ನಾಟಕ ಪಂಚಾಯತ್‌ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
6. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ರಾಜಾಜಿನಗರ, ಬೆಂಗಳೂರು.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
8. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಉಪನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
11. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು.
12. ವಿಶೇಷಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ-6), ವಿಧಾನಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
15. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
16. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
17. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ ಮಾಸಪತ್ರಿಕೆ – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
18. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

*****